ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆಯ ವತಿಯಿಂದ ಕೆರೆಗಳ ನಿರ್ಮಾಣ

2626(2989) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆವತಿಯಿಂದ ಹೊಸದಾಗಿ ಕೆರೆಗಳ ನಿರ್ಮಾಣ ಮಾಡುವ ಯೋಜನೆ ರೂಪಿಸಲಾಗಿದೆಯೆ;

ಆ) ರೂಪಿಸಲಾಗಿದ್ದಲ್ಲಿ, ಎಷ್ಟು ಕೆರೆಗಳನ್ನು ನಿರ್ಮಾಣ ಮಾಡಲು ಯೋಚಿಸಲಾಗಿದೆ; ಇದಕ್ಕಾಗಿ ಕಾದಿರಿಸಿದ ಹಣದ ಮೊತ್ತವೆಷ್ಟು;

ಇ) ಬೆಳ್ತಂಗಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ನೂತನ ಕೆರೆಗಳ ನಿರ್ಮಾಣದ ಅವಶ್ಯಕತೆ ಇರುವುದನ್ನು ಸರ್ಕಾರ ಮನಗಂಡಿದೆಯೇ; ಹೌದಾದಲ್ಲಿ, ಆ ಕುರಿತ ಕ್ರಿಯಾ ಯೋಜನೆಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು) :

ಅ) ರೂಪಿಸಲಾಗಿದೆ.

ಆ) 2003–04ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 4702 ಹೊಸಕೆರೆ ನಿರ್ಮಾಣ (ನಬಾರ್ಡ್) ಅಡಿಯಲ್ಲಿ 39 ಹೊಸಕೆರೆಗಳನ್ನು ನಿರ್ಮಿಸಲು ಯೋಜಿಸಿದ್ದು, ಇದಕ್ಕಾಗಿ ರೂ. 670.50 ಲಕ್ಷ ಅನುದಾನ ಒದಗಿಸಲಾಗಿದೆ.

ಇ) ಬೆಳ್ತಂಗಡಿ ವಿಧಾನ ಸಭಾ ಕ್ಷೇತ್ರದಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ 100 ಎಕರೆಗೂ ಮೇಲ್ಪಟ್ಟು ಅಚ್ಚುಕಟ್ಟು ಹೊಂದುವ ಪ್ರದೇಶದಲ್ಲಿ ಹೊಸಕೆರೆಗಳನ್ನು ನಿರ್ಮಾಣ ಮಾಡುವ ಯಾವುದೇ ಪ್ರಸ್ತಾವನೆಗಳು ಬಂದಿರುವುದಿಲ್ಲವಾದ್ದರಿಂದ, ಕ್ರಿಯಾ ಯೋಜನೆಯನ್ನು ರೂಪಿಸಿರುವುದಿಲ್ಲ.

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಕೆ.ಎ.ಎಸ್. ಪರೀಕ್ಷಾ ಕೇಂದ್ರಗಳ ತೆರೆಯುವ ಬಗ್ಗೆ

2627(2990) ಶ್ರೀ ಪ್ರಭಾಕರ ಕೆ. ಬಂಗೇರ (ಬೆಳ್ತಂಗಡಿ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿನ ಕೆ.ಎ.ಎಸ್. ಪರೀಕ್ಷಾ ಕೇಂದ್ರಗಳನ್ನು ಎಲ್ಲೆಲ್ಲಿ ನಿಗದಿಪಡಿಸಲಾಗಿದೆ; ಇನ್ನೂ ಹೆಚ್ಚುವರಿ ಕೇಂದ್ರಗಳನ್ನು ಜಿಲ್ಲಾ ಕೇಂದ್ರಗಳಲ್ಲಿ ತೆರೆಯಲು ಸರ್ಕಾರ ಯೋಚಿಸಿದೆಯೇ;

ಆ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಪರೀಕ್ಷಾ ಕೇಂದ್ರವನ್ನು ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ;

ಇ) ಆರ್ಥಿಕವಾಗಿ ಹಿಂದುಳಿದ ಎಲ್ಲ ಜಾತಿ ವರ್ಗಗಳ ವಿದ್ಯಾರ್ಥಿಗಳ ಕೆ.ಎ.ಎ.ಸ್. ಪರೀಕ್ಷಾ ಪೂರ್ವ ತರಬೇತಿ ಕೇಂದ್ರಗಳನ್ನು ಪ್ರತಿಯೊಂದು ಜಿಲ್ಲೆಯಲ್ಲಿ ತೆರೆಯಲು ಸರ್ಕಾರದ ಕ್ರಮ ಕೈಗೊಳ್ಳುವುದೇ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು) :

ಅ) ಗೆಜೆಟೆಡ್ ಪ್ರೊಬೇಷನರ್‌ಗಳ ಪರೀಕ್ಷೆಯನ್ನು ನಡೆಸಲು ಪರೀಕ್ಷಾ ಕೇಂದ್ರಗಳನ್ನು ರಾಜ್ಯದ ನಾಲ್ಕು ವಿಭಾಗೀಯ ಕೇಂದ್ರಗಳಲ್ಲಿ ನಿಗದಿಪಡಿಸಲಾಗಿರುತ್ತದೆ. ಅಭ್ಯರ್ಥಿಗಳ ಸಂಖ್ಯೆಯನ್ನು ಆಧರಿಸಿ ಪರೀಕ್ಷಾ ಕೇಂದ್ರಗಳನ್ನು ಗೊತ್ತು ಪಡಿಸಲಾಗುವುದರಿಂದ ಜಿಲ್ಲಾ ಕೇಂದ್ರಗಳಲ್ಲಿ ಪರೀಕ್ಷಾ ಕೇಂದ್ರಗಳನ್ನು ತೆರೆಯಲು ಸದ್ಯಕ್ಕೆ ಯೋಚಿಸಿರುವುದಿಲ್ಲ.

ಆ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಪರೀಕ್ಷಾ ಕೇಂದ್ರವನ್ನು ತೆರೆಯುವ ಉದ್ದೇಶ ಸದ್ಯಕ್ಕೆ ಇರುವುದಿಲ್ಲ.

ಇ) ಇಂತಹ ಪ್ರಸ್ತಾವವು ಸದ್ಯಕ್ಕೆ ಸರ್ಕಾರದ ಮುಂದಿರುವುದಿಲ್ಲ.

ಬೆಳ್ತಂಗಡಿ ತಾಲ್ಲೂಕಿನಲ್ಲಿಯ ಕಿಂಡಿ ಅಣೆಕಟ್ಟುಗಳ ನಿರ್ಮಾಣ

2628(2991) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಕಿಂಡಿ ಅಣೆಕಟ್ಟುಗಳನ್ನು ಯಾವ ಯಾವ ಕಡೆಗಳಲ್ಲಿ ನಿರ್ಮಿಸಲು ಯೋಜಿಸಲಾಗಿದೆ;

ಆ) ಅದರೊಂದಿಗೆ ವಾಹನ ಸಂಚಾರಕ್ಕೂ ಅನುಕೂಲ ಮಾಡಿಕೊಡುವ ಸೇತುವೆ ನಿರ್ಮಾಣ ಮಾಡುವ ಕ್ರಿಯಾ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ವಿವರಗಳೇನು;

ಇ) ಬೆಳ್ತಂಗಡಿ ತಾಲ್ಲೂಕಿನ ತೆಂಕಕಾರಂದೂರು ಗ್ರಾಮದ ಗಳಿಕಾಮ ಎಂಬಲ್ಲಿ ಸೇತುವೆ ನಿರ್ಮಾಣ ಮತ್ತು ಕಿಂಡಿ ಅಣೆಕಟ್ಟು ನಿರ್ಮಾಣವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು) :

ಅ) ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಬೆಳ್ತಂಗಡಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಯಾವುದೇ ಕಿಂಡಿ ಅಣೆಕಟ್ಟು ನಿರ್ಮಾಣ ಕಾಮಗಾರಿಗಳು ಸೇರಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಭಾಲ್ಕಿ ಪಟ್ಟಣಕ್ಕೆ ಐ.ಡಿ.ಎಸ್.ಎಂ.ಟಿ. ಪತಿಯಿಂದ ಮಂಜೂರಾದ ಹಣ

2629(3422) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) : ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಭಾಲ್ಕಿ ಪಟ್ಟಣದಲ್ಲಿ ಐ.ಡಿ.ಎಸ್.ಎಂ.ಟಿ. ಪತಿಯಿಂದ 2.00 ಕೋಟಿ ಹಣ ಮಂಜೂರಾಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; 2.00 ಕೋಟಿ ಹಣದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ರೂ. 72.64 ಲಕ್ಷ ಭಾಲ್ಕಿ ಪುರಸಭೆಗೆ ಹಣ ಬಂದು 4 ತಿಂಗಳಾದರೂ ಕೆಲಸ ಪ್ರಾರಂಭ ಮಾಡುತ್ತಿಲ್ಲದ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗಿದೆ;

ಆ) ಬೀದರ್ ಜಿಲ್ಲೆಯ ಭಾಲ್ಕಿ ಪಟ್ಟಣದಲ್ಲಿ ಕುಡಿಯುವ ನೀರಿನ ಯೋಜನೆಯಿಂದ ಎಸ್.ವಿ.ಇ. ಸೊಸೈಟಿಯವರು ನೇರ ನೀರು ತೆಗೆದುಕೊಳ್ಳುತ್ತಿರುವುದು ಲೋಕಾಯುಕ್ತರ ಗಮನಕ್ಕೆ ಬಂದ ನಂತರ ತೆಗೆದುಕೊಂಡ ಕ್ರಮವೇನು;

ಇ) ಲೋಕಾಯುಕ್ತರು ಕೊಟ್ಟ ಆದೇಶ ಏನು;

ಈ) ಲೋಕಾಯುಕ್ತರು ಪುರಸಭೆಗೆ ಕೊಟ್ಟ ಆದೇಶದಂತೆ ಭಾಲ್ಕಿ ಪುರಸಭೆಯವರು ಎಸ್.ವಿ.ಇ. ಸೊಸೈಟಿಯ ಮೇಲೆ ಕೈಗೊಂಡ ಕ್ರಮವೇನು?

ಶ್ರೀ ಎಸ್. ಕುಮಾರಬಂಗಾರಪ್ಪ (ಪೌರಾಡಳಿತ ಸಚಿವರು) :

ಅ) ಭಾಲ್ಕಿ ಪಟ್ಟಣವು ಐ.ಡಿ.ಎಸ್.ಎಂ.ಟಿ ಯೋಜನೆಯಡಿ 2002–03ನೇ ಸಾಲಿನಲ್ಲಿ ಆಯ್ಕೆಗೊಂಡಿದ್ದು, ರೂ. 2.00 ಕೋಟಿ ರೂ.ಗಳ ಯೋಜನಾ ಮೊತ್ತವು ಮಂಜೂರಾಗಿರುತ್ತದೆ.